

Scanned by CamScanner




Scanned by CamScanner




Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

೧೯೧೮ರಲ್ಲಿ ಸರ್ಕಾರದ ಮುಖ್ಯ ನ್ಯಾಯಾಧೀಶರಾಗಿದ್ದ ಸರ್.ಲೆಸ್ಲಿ ಮಿಲ್ಲರ್ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿ, ಎಲ್ಲಾ ಸಮುದಾಯದ ಜನರಿಗೆ ಸರ್ಕಾರಿ ಉದ್ಯೋಗದಲ್ಲಿ ಪ್ರತಿನಿಧ್ಯ ದೊರಕುವಂತೆ ಅಧ್ಯಯನ ಮಾಡಿ,
ವರದಿ ನೀಡಲು ಆದೇಶ ಮಾಡಿದರು. ನಂತರ ಆಯೋಗದ ಶಿಫಾರಸ್ಸುಗಳಂತೆ ಬ್ರಾಹ್ಮಣರು, ಆಂಗ್ಲೋ ಇಂಡಿಯನ್ನರನ್ನು ಹೊರತು ಪಡಿಸಿ ಉಳಿದ ಎಲ್ಲಾ ಜಾತಿಗಳನ್ನು ಹಿಂದೂಗಳೆಂದು ಪರಿಗಣಿಸಿ,
೧೯೨೧ರಲ್ಲಿ ಪ್ರಥಮ ಭಾರಿಗೆ ಎಲ್ಲಾ ಹಿಂದುಳಿದ ಸಮುದಾಯಗಳಿಗೆ ಶೇ.೭೫ರಷ್ಟು ಮೀಸಲಾತಿ ನೀಡಲು ಆದೇಶ ಹೊರಡಿಸಿದರು. ಹಾಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು "ಮೀಸಲಾತಿಯ ಜನಕ" ಎನ್ನುತ್ತಾರೆ.
ಮಿಲ್ಲರ್ ಆಯೋಗ ರಚನೆ ಸಾಮಾಜಿಕ ಇತಿಹಾಸದಲ್ಲೇ ಒಂದು ಮೈಲಿಗಲ್ಲಾಯಿತು. ಮಿಲ್ಲರ್ ಆಯೋಗ ಜಾರಿಗೆ ಬರಲಾಗಿ ಮೊಟ್ಟ ಮೊದಲ ಬಾರಿಗೆ ಮೈಸೂರು ಸಂಸ್ಥಾನಕ್ಕೆ ಕಾಂತರಾಜೇ ಅರಸ್ ದಿವಾನರಾಗಲು ಸಾಧ್ಯವಾಯಿತು.
ಈ ಕಾಲದಲ್ಲೇ ಒಕ್ಕಲಿಗರ ಸಂಘ, ರೆಡ್ಡಿ ಜನಸಂಘ, ವೀರಶೈವರ ಜಾತಿ ಆಧಾರಿತ ಶಾಲಾ- ಕಾಲೇಜುಗಳು ಆರಂಭವಾದುವು. ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆ ಎಂದರೆ,
ಸ್ಥಳೀಯ ಸಂಸ್ಥೆಗಳನ್ನು ರಚಿಸಿ, ಆಡಳಿತ ವಿಕೇಂದ್ರೀಕರಣಕ್ಕೆ ಅನುವು ಮಾಡಿ ಕೊಟ್ಟಿದು. ರಾಜ್ಯದ ಸಣ್ಣ ಸಣ್ಣ ಪಟ್ಟಣಗಳಲ್ಲಿಯೂ ಸಹ ಮುನಿಸಿಪಾಲಿಟಿಗಳು ರಚನೆಯಾದವು.
ಹಳ್ಳಿಗಳಲ್ಲಿ ಪ್ರಥಮ ಬಾರಿಗೆ ಗ್ರಾಮ ಪಂಚಾಯಿತಿಗಳು ಕಾರ್ಯ ನಿರ್ವಹಿಸಲು ಆರಂಭ ಮಾಡಿದುದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ಆಡಳಿತದಲ್ಲಿ ಜನರ ಭಾಗವಹಿಸುವಿಕೆಗೆ ಅಪಾರ ಉತ್ತೇಜನ ನೀಡಲಾಯಿತು.
ಇವರ ಕಾಲದಲ್ಲಿ ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ ನಾಲ್ವಡಿಯವರನ್ನ ವಿದ್ವಾಂಸರು, ಶಿಕ್ಷಣ ತಜ್ಞರು, ಇತಿಹಾಸಕಾರರು
' ಸಾಮಾಜಿಕ ಕಾನೂನುಗಳ ಹರಿಕಾರ' ಎಂದು ಕರೆದಿದ್ದಾರೆ. ಸಾಹಿತ್ಯ, ಸಂಗೀತ, ವಾಸ್ತು ಶಿಲ್ಪಗಳ ಅಭಿವೃದ್ಧಿಗೆ ಪ್ರಾಮುಖ್ಯತೆಯನ್ನು ಕೊಟ್ಟು ೧೯೧೫ ರಲ್ಲಿ ಬೆಂಗಳೂರಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರಾರಂಭಿಸಿದರು.
ಗ್ರಾಮ ನೈರ್ಮಲೀಕರಣ * ವೈದ್ಯ ಸಹಾಯ * ವಿದ್ಯಾ ಪ್ರಚಾರ * ನೀರಿನ ಸೌಕರ್ಯ ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಸಂಸ್ಥೆಗಳಾದವು.

– ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

## ನೀರಾವರಿ

೧೯೦೭ರಲ್ಲಿ 'ವಾಣೀವಿಲಾಸ ಸಾಗರ'(ಮಾರಿ ಕಣಿವೆ) ಕಟ್ಟಲ್ಪಟ್ಟಿತು.
೧೯೧೧ ರಲ್ಲಿ ಆರಂಭವಾದ 'ಕೃಷ್ಣರಾಜ ಸಾಗರ' ಭಾರತದ ಮೊಟ್ಟ ಮೊದಲ ಬೃಹತ್ ಜಲಾಶಯ.
೧೯೦೦ರಲ್ಲಿಯೇ ಶಿವನ ಸಮುದ್ರದ ಬಳಿ ಕಾವೇರಿ ನದಿ ಯಿಂದ ಜಲ ವಿದ್ಯುತ್ ಕೇಂದ್ರ ಆರಂಭವಾಯಿತು.
ಇದು ಭಾರತದ ಮೊದಲ ಜಲ ವಿದ್ಯುತ್ ಕೇಂದ್ರ, ಏಷ್ಯಾ ಖಂಡದಲ್ಲೇ ಮೊದಲ ಜಲ ವಿದ್ಯುತ್ ಯೋಜನೆಯನ್ನು ಪ್ರಾರಂಭಿಸಿದ ಕೀರ್ತಿ ನಾಲ್ವಡಿಯವರದು. ಇದರ ಫಲಿತಾಂಶವಾಗಿ ೧೯೦೫ ಆಗಸ್ಟ್ ೩ ರಂದು ಪ್ರಥಮವಾಗಿ ಬೆಂಗಳೂರಿನಲ್ಲಿ ದೀಪಗಳು ಬೆಳಗಿದವು.

– ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

## ಶೈಕ್ಷಣಿಕ ಕೊಡುಗೆ ಮತ್ತು ಸುಧಾರಣೆ

ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು, ಉಚಿತವಾಗಿ ಮತ್ತು ಕಡ್ಡಾಯವಾಗಿ ಆರಂಭಿಸಲಾಯಿತು .ನಾಲ್ವಡಿ ಕೃಷ್ಣರಾಜರ ಮಹತ್ತರ ಸಾಧನೆಯೆಂದರೆ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದುದು. ದೇಶದಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವನ್ನು ಮೈಸೂರಿನಲ್ಲಿ ತೆರೆದು ದಾಖಲೆ ನಿರ್ಮಿಸಿದ ಕೀರ್ತಿ ನಾಲ್ವಡಿಯವರಿಗೆ ಸಲ್ಲುತ್ತದೆ. ಅವರ ಕಾಲದಲ್ಲಿ ರಾಜ್ಯದ ನಾನಾ ಭಾಗಗಳಲ್ಲಿ ೨೭೦ ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದವು.

ಬೆಂಗಳೂರಿನ ಮಿಂಟೊ ಕಣ್ಣಾಸ್ಪತ್ರೆ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿತ್ತು. ಮೈಸೂರಿನ ಕ್ಷಯರೋಗ ಆಸ್ಪತ್ರೆ ಉತ್ತಮಗೊಂಡಿತು. ವಾಣಿಜ್ಯ ಕ್ಷೇತ್ರದಲ್ಲಿ ಮೈಸೂರು ಬ್ಯಾಂಕ್ ಖಾಸಗೀ ಸಹಭಾಗಿತ್ವದೊಡನೆ ಕಾರ್ಯಾರಂಭ ಮಾಡಿತು. ೧೯೦೬ ರಲ್ಲಿಯೇ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು. ರೈತರಿಗಾಗಿ ಜಮೀನು ಅಡಮಾನ ಬ್ಯಾಂಕುಗಳು ಆರಂಭವಾದವು.

ಬುಡಕಟ್ಟು, ಗಿರಿಜನ, ಅರಣ್ಯವಾಸಿಗಳಿಗೆ ಮೊಟ್ಟ ಮೊದಲು ಶಾಲೆಗಳನ್ನು ತೆರೆಯಲಾಯಿತು. ಅಸ್ಪೃಶ್ಯರಿಗಾಗಿಯೇ ಹುಸ್ಕೂರು ಹಾಗೂ ಟಿ.ನರಸೀಪುರದಲ್ಲಿ ಶಾಲೆಗಳನ್ನು ಪ್ರಾರಂಭಿಸಲಾಯಿತು. ತಂತರ ಇವರ ಆಡಳಿತಾವಧಿಯಲ್ಲಿ ಸುಮಾರು ೮೦೦ ಶಾಲೆಗಳನ್ನು ತೆರೆಯಲಾಯಿತು.

ಮೊಟ್ಟ ಮೊದಲ ಬಾರಿಗೆ ಸ್ತ್ರೀ ಶಿಕ್ಷಣವನ್ನು ಕಡ್ಡಾಯ ಮಾಡಲಾಯಿತು.

೧೯೦೨ – ಬೆಂಗಳೂರಿನ ಪ್ರಥಮ ವಾಣಿಜ್ಯಶಾಲೆ ಪ್ರಾರಂಭಿಸಲಾಯಿತು.

೧೯೦೩ – ಮೈಸೂರಿನಲ್ಲಿ ತಾಂತ್ರಿಕ ಶಾಲಾ ಸ್ಥಾಪನೆ.

೧೯೦೬ – ಕುರುಡ ಹಾಗೂ ಮೂಕ ಮಕ್ಕಳಿಗೆ ಶಾಲೆಗಳನ್ನು ಪ್ರಾರಂಭಿಸಿದರು.

೧೯೧೧ – ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಆರಂಭಿಸಲಾಯಿತು.

೧೯೧೨ – ಮೊದಲ ಬಾರಿಗೆ ವಯಸ್ಕರ ಶಿಕ್ಷಣ ಆಂದೋಲನ ಪ್ರಾರಂಭಿಸಿ, ೭೦೦೦ ಸಾಕ್ಷರತಾ ಕೇಂದ್ರಗಳನ್ನು ತೆರೆದಿದ್ದರು.

೧೯೧೬ – ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ. ಉರ್ದು ಶಾಲೆಗಳ ಸ್ಥಾಪನೆ.

– ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

## ಜಾರಿ ಮಾಡಿದ ಸಾಮಾಜಿಕ ಕಾನೂನುಗಳು

೧೯೦೯ ರಲ್ಲಿ ದೇವದಾಸಿ ಪದ್ಧತಿ ನಿಷೇಧ

೧೯೧೦ ರಲ್ಲಿ ಬಸವಿ ಪದ್ಧತಿ ರದ್ಧತಿ

೧೯೧೦ ರಲ್ಲಿ 'ಗೆಜ್ಜೆಪೂಜೆ' ಪದ್ಧತಿ ಸಂಪೂರ್ಣ ನಿರ್ಮೂಲನೆ

೧೯೩೬ ಜುಲೈ ೧೪ ರಂದು ವೇಶ್ಯಾವೃತ್ತಿ ತಡೆಗಟ್ಟುವ ಕಾಯ್ದೆ ಜಾರಿ

೧೯೩೬ ಜುಲೈ ೭ ರಂದು ವಿಧವೆಯರಿಗೆ ಮರುವಿವಾಹ ಮಾಡಿಕೊಳ್ಳುವ ಕಾಯ್ದೆಯ ಜಾರಿ

೧೯೩೬ ಜುಲೈ ೭ ರಂದು ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿ

೧೯೧೪ ರಲ್ಲಿ ಶಾಲಾ ಪ್ರವೇಶಕ್ಕೆ ಜಾತಿ ಪರಿಗಣನೆಯ ನಿಷೇಧ

೧೯೧೯ ರಲ್ಲಿ ಮಾಧ್ಯಮಿಕ ಶಾಲಾ ಮಟ್ಟದಲ್ಲಿ ಶಿಕ್ಷಣ ಶುಲ್ಕ ರದ್ಧತಿ

೧೯೨೭ ರಲ್ಲಿ ಸ್ತ್ರೀಯರಿಗೆ ಮತದಾನದ ಹಕ್ಕನ್ನು ಮೊಟ್ಟಮೊದಲ ಬಾರಿಗೆ ಕಲ್ಪಿಸಿಕೊಟ್ಟರು

೧೯೦೫ ರಲ್ಲಿ ಸಹಕಾರಿ ಕಾರ್ಮಿಕ ಪರಿಹಾರ ಕಾಯ್ದೆಯನ್ನು ಜಾರಿಗೆ ತಂದರು

೧೯೧೩ ರಲ್ಲಿ ಮೈಸೂರು ಗ್ರಾಮ ನ್ಯಾಯಾಲಯ ಕಾಯ್ದೆಯನ್ನು ಜಾರಿ ಮಾಡಿದರು

೧೯೧೮ ರಲ್ಲಿ ಗ್ರಾಮ ಪಂಚಾಯ್ತಿಗಳ ಕಾಯ್ದೆಯನ್ನು ಜಾರಿಗೆ ತಂದರು

– ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

### ಆರ್ಥಿಕ ಸುಧಾರಣೆಗಳು

ಭಾರತದ ಆರ್ಥಿಕತೆಯ ಬೆನ್ನೆಲುಬು ಕೃಷಿ ಎಂದು ಅರಿತಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ರೈತರಿಗೆ ಸುಲಭವಾಗಿ ಸಾಲ ದೊರೆಯುವಂತೆ ಅನುಕೂಲವಾಗಲು ೧೯೦೫ರಲ್ಲಿ ಸಹಕಾರಿ ಸೊಸೈಟಿಗಳನ್ನು ಜಾರಿಗೆ ತಂದರು. ಆ ಮೂಲಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕು ಮತ್ತು ಭೂ ಅಭಿವೃದ್ಧಿ ಬ್ಯಾಂಕ್‌ಗಳು ಪ್ರಾರಂಭಗೊಂಡವು.
ಮಂಡ್ಯ ಮತ್ತು ಮೈಸೂರು ಪ್ರಾಂತ್ಯದ ರೈತರ ಒಣಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ನಾಲ್ವಡಿ ಕೃಷ್ಣರಾಜ ಒಡೆಯರ್ ಕಾವೇರಿ ನದಿಗೆ ಅಡ್ಡಲಾಗಿ ಕೃಷ್ಣರಾಜ ಸಾಗರ ಅಣೆಕಟ್ಟನ್ನು ಕಟ್ಟಿಸಿ, ೧,೨೦,೦೦೦ಎಕರೆ ಜಮೀನಿಗೆ ನೀರಾವರಿ ಕಲ್ಪಿಸಿದರು.
ಸ್ಥಳೀಯ ಆಡಳಿತಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಲು ೧೯೧೮ ರಲ್ಲಿ ಗ್ರಾಮ ಪಂಚಾಯ್ತಿಗಳ ಕಾಯ್ದೆಯನ್ನು ಜಾರಿಗೆ ತರಲಾಯಿತು.
ಗ್ರಾಮೀಣ ಜನರಿಗೆ ಶೀಘ್ರ ನ್ಯಾಯ ಒದಗಿಸಲು ಅವರಿಗೆ ೧೯೧೩ರಲ್ಲಿ 'ದಿ ಮೈಸೂರು ವಿಲೇಜ್ ಕೋರ್ಟ್ ಆಕ್ಟ್'ನ್ನು ಜಾರಿಗೆ ತಂದರು.
ರೈತರು ಸಾಲದ ಅಡಿಯಲ್ಲಿ ಸಿಕ್ಕಿ ಭೂಮಿಯನ್ನು ಕಳೆದುಕೊಳ್ಳುವ ಸ್ಥಿತಿ ತಲುಪಿದಾಗ ನಾಲ್ವಡಿ ಕೃಷ್ಣರಾಜ ಒಡೆಯರ್ ೧೯೨೮ರಲ್ಲಿ 'ಅಗ್ರಿಕಲ್ಚರಿಸ್ಟ್ ಡಿಬೆಟ್ ರಿಲೀಫ್ ಆಕ್ಟ್"ನ್ನುಜಾರಿಗೊಳಿಸಿದರು.
ಏಷ್ಯಾ ಖಂಡದಲ್ಲೇ ಮೊದಲ ಜಲ ವಿದ್ಯುತ್ ಯೋಜನೆಯನ್ನು ಪ್ರಾರಂಭಿಸಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಸಲ್ಲುತ್ತದೆ. ೧೯೦೨ ರಲ್ಲಿ ಕಾವೇರಿ ನದಿಗೆ ಶಿವನ ಸಮುದ್ರದಲ್ಲಿ ಜಲವಿದ್ಯುತ್ ಕಾರ್ಯಾಗಾರ ಸ್ಥಾಪನೆಯಾಯಿತು. ಜೊತೆಗೆ ಪ್ರಥಮ ಬಾರಿಗೆ ವಿದ್ಯುತ್‌ನ್ನು ಕೋಲಾರದ ಗಣಿ ಪ್ರದೇಶಕ್ಕೆ ವರ್ಗಾಯಿಸಲಾಯಿತು. ೧೯೩೮ರ ಫೆಬ್ರವರಿ ೫ರಂದು ಜೋಗ ಜಲಪಾತದ ಬಳಿ ಶರಾವತಿ ನೀರಿನಿಂದ ವಿದ್ಯುತ್ ಉತ್ಪಾದನೆ ಮಾಡಲು ಯೋಜನೆ ರೂಪಿಸಲಾಯಿತು.

– ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

### ರಸ್ತೆ ಸಾರಿಗೆ

ಬೆಂಗಳೂರು-215 ಮೈಲಿ
ಕೊಲಾರ -211 ಮೈಲಿ
ತುಮಕೂರು -189 ಮೈಲಿ
ಚಿತ್ರದುರ್ಗ - 220 ಮೈಲಿ
ಮೈಸೂರು -368 ಮೈಲಿ
ಹಾಸನ - 191 ಮೈಲಿ
ಶಿವಮೊಗ್ಗ - 283 ಮೈಲಿ
ಕಡೂರು - 325 ಮೈಲಿ

### ರೈಲು ಸಾರಿಗೆ

1913 ರಲ್ಲಿ ಹೊಸ ರೈಲು ಸಾರಿಗೆ ನಿರ್ಮಾಣ ಇಲಾಖೆ ಆರಂಭವಾಯಿತು
1918 ರಲ್ಲಿ ಚಿಕ್ಕಬಳ್ಳಾಪುರ-ಯಲಹಂಕ-ಮೈಸೂರು-ಅರಸೀಕೆರೆ ಮೀಟರ್ ಗೇಜ್ ನಿರ್ಮಾಣವಾಯಿತು.
1921 ರಲ್ಲಿ ಚಿಕ್ಕ ಜಾಜೂರು-ಚಿತ್ರದುರ್ಗ ಮೀಟರ್ ಗೇಜ್ ನಿರ್ಮಾಣವಾಯಿತು.

- ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

ರೈಲ್ವೆ ಕಾರ್ಯಗಾರ, ಅಶೋಕಪುರಂ, ಮೈಸೂರು-570008

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

## ಕೈಗಾರಿಕ ಅಭಿವೃದ್ದಿಗಳು

1914ರಲ್ಲಿ ಮೆಕಾನಿಕಲ್ ಇಂಜನಿಯರಿಂಗ್ ಸ್ಕೂಲನ್ನು ಆರಂಭಿಸಿದರು. ಈ ಸಂದರ್ಭದಲ್ಲಿ ಆರಂಭಗೊಂಡ ಕೈಗಾರಿಕೆಗಳೆಂದರೆ


ಭದ್ರಾವತಿಯ ಮೈಸೂರು ಕಬ್ಬಿಣದ ಕಾರ್ಖಾನೆ
ಬೆಂಗಳೂರಿನ ಸಾಬೂನು ಕಾರ್ಖಾನೆ
ಮೈಸೂರಿನ ಗಂಧದೆಣ್ಣೆ ಕಾರ್ಖಾನೆ
ಸಿಮೆಂಟ್ ಕಾರ್ಖಾನೆ
1934 - ಮಂಡ್ಯದಲ್ಲಿ ಮೈಸೂರು ಸಕ್ಕರೆ ಕಂಪೆನಿ ಪ್ರಾರಂಭ
1936 - ಮೊಟ್ಟ ಮೊದಲ ಮೈಸೂರು ಪೇಪರ್ ಮಿಲ್ ಆರಂಭ
ಮಂಗಳೂರು ಹೆಂಚು ಕಾರ್ಖಾನೆ
ಷಹಬಾದಿನ ಸಿಮೆಂಟ್ ಕಾರ್ಖಾನೆ
ಮೈಸೂರಿನ ಅರಗು ಮತ್ತು ಬಣ್ಣದ ಕಾರ್ಖಾನೆ
ಕೊಡಗಿನ ಕಾಫಿ ಸಂಶೋಧನಾ ಕೇಂದ್ರಗಳು ಪ್ರಾರಂಭಗೊಂಡವು

- ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಕ್ರೀಯಾ ಸಮಿತಿ

Scanned by CamScanner

# ನಾಲ್ವಡಿ ಕೃಷ್ಣರಾಜ ಒಡೆಯರ್

**ಮೈಸೂರು ದೊರೆಗಳು**



ನಾಲ್ವಡಿ ಕೃಷ್ಣರಾಜ ಒಡೆಯರ್
೧೯೦೬ರಲ್ಲಿ ಕಲಾವಿದರಾದ ಕೆ.ಕೇಶವಯ್ಯ ವಿರಚಿತ

| | |
|---|---|
| **Reign** | ೧೮೯೪-೧೯೪೦ |
| **Coronation** | 1 ಫೆಬ್ರವರಿ 1895, ಮೈಸೂರು ಅರಮನೆ |
| **ಜನನ** | ೦೪ ಜೂನ್ ೧೮೮೪ |
| **ಜನ್ಮ ಸ್ಥಳ** | ಮೈಸೂರು ಅರಮನೆ, ಮೈಸೂರು, ಮೈಸೂರು ರಾಜ್ಯ |
| **ಮರಣ** | ೦೩ ಆಗಸ್ಟ್ ೧೯೪೦ |

Scanned by CamScanner

| | |
|---|---|
| ಮರಣ | ೦೩ ಆಗಸ್ಟ್ ೧೯೪೦ |
| ಮರಣ ಸ್ಥಳ | ಬೆಂಗಳೂರು ಅರಮನೆ, ಬೆಂಗಳೂರು, ಮೈಸೂರು ರಾಜ್ಯ |
| ಪೂರ್ವಾಧಿಕಾರಿ | ಹತ್ತನೇ ಚಾಮರಾಜ ಒಡೆಯರ್ |
| ಉತ್ತರಾಧಿಕಾರಿ | ಜಯಚಾಮರಾಜೇಂದ್ರ ಒಡೆಯರ್ |
| Consort to | ಲಕ್ಷ್ಮೀ ವಿಲಾಸ ಸನ್ನಿಧಾನ ಶ್ರೀ ಪ್ರತಾಪ ಕುಮಾರಿ ಅಮ್ಮಣ್ಣಿಯವರು |
| Royal House | ಒಡೆಯರ್ ಸಾಮ್ರಾಜ್ಯ |
| ತಂದೆ | ಹತ್ತನೇ ಚಾಮರಾಜ ಒಡೆಯರ್ |
| ತಾಯಿ | ಮಹಾರಾಣಿ ಕೆಂಪನಂಜಮ್ಮಣ್ಣಿ |
| ಧಾರ್ಮಿಕ ನಂಬಿಕೆಗಳು | ಹಿಂದೂ |



Scanned by CamScanner

ನಾಲ್ವಡಿ ಕೃಷ್ಣರಾಜ ಒಡೆಯರು

**ನಾಲ್ವಡಿ ಕೃಷ್ಣರಾಜ ಒಡೆಯರು** (ಜೂನ್ ೪, ೧೮೮೪ - ಆಗಸ್ಟ್ ೩, ೧೯೪೦) ಮೈಸೂರು ಸಂಸ್ಥಾನದ ಒಡೆಯರ್ ರಾಜಸಂತತಿಯ ೨೪ನೇ ರಾಜರು. ಇವರ ಆಳ್ವಿಕೆ ೧೯೦೨ ರಿಂದ ೧೯೪೦ ರವರೆಗೆ ನಡೆಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ೧೮೯೫ರಲ್ಲಿ ಪಟ್ಟಾಭಿಷಿಕ್ತರಾದರೂ ಸಹ, ಕೇವಲ ೧೦ ವರ್ಷದ ಬಾಲಕರಾಗಿದ್ದುದರಿಂದ ಅವರ ತಾಯಿಯವರಾದ, ಮಾತೃಶ್ರೀ ಮಹಾರಾಣಿ ವಾಣಿ ವಿಲಾಸ ಸನ್ನಿಧಾನದವರು ರೀಜೆಂಟರಾಗಿ ಆಡಳಿತ ನಿರ್ವಹಣೆ ಮಾಡಿದರು. ರಾಜಕುಮಾರನಿಗೆ ಸೂಕ್ತ ವಿದ್ಯಾಭ್ಯಾಸ, ಆಡಳಿತ ತರಬೇತಿ ಇವುಗಳನ್ನು ಮಹಾರಾಣಿಯವರು ತೀವ್ರ ನಿಗಾ ವಹಿಸಿ ನಡೆಸಿದುದರ ಪರಿಣಾಮವಾಗಿ, ಮೈಸೂರು ರಾಜ್ಯಕ್ಕೆ ಒಬ್ಬ ಸಮರ್ಥ ಆಡಳಿತಗಾರರಾಗಿ ನಾಲ್ವಡಿ ಕೃಷ್ಣರಾಜ ಒಡೆಯರು ದೊರಕಿದರು.

## ಜನನ/ ಜೀವನ

Scanned by CamScanner

# ಜನನ/ ಜೀವನ

- ಇವರು ಗಣಿತ, ವಿಜ್ಞಾನ, ಇತಿಹಾಸ, ಭೂಗೋಳ ವಿಷಯಗಳ ಬಗ್ಗೆ ಆಳವಾದ ಪರಿಜ್ಞಾನ ಹೊಂದಿದ್ದರು. ಇವರ ಸಹಪಾಠಿಗಳು ಮಿರ್ಜಾಇಸ್ಮಾಯಿಲ್, ಕಾಂತರಾಜೇ ಅರಸ್, ಟಿ.ಗುಂಡಪ್ಪ ಮೊದಲಾದವರು. ತಂದೆ ಚಾಮರಾಜ ಒಡೆಯರ್ ನಿಧನರಾದ ಮೇಲೆ ೧೮೯೫ನೇ ಫೆಬ್ರವರಿ ೧ನೇ ತಾರೀಖು ನಾಲ್ವಡಿಯವರಿಗೆ ಪಟ್ಟಾಭಿಷೇಕವಾಯಿತು. ಇವರು ಅಪ್ರಾಪ್ತ ವಯಸ್ಕರಾದುದರಿಂದ ತಾಯಿ ರಾಜಮಾತೆ ಕೆಂಪನಂಜಮ್ಮಣ್ಣಿ ಅವರು ರಾಜಪ್ರತಿನಿಧಿಯಾಗಿ ಕಾರ್ಯನಿರ್ವಹಿಸಿದರು.

- ಜೂನ್ ೬,೧೯೦೦ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ತಮ್ಮ ೧೬ನೇ ವಯಸ್ಸಿನಲ್ಲಿ ಕಾಥೇವಾಡದ ರಾಣಾಶ್ರೀ ವಿನಯಸಿಂಹರ ಪುತ್ರಿ ಶ್ರೀ ಪ್ರತಾಪಕುಮಾರಿದೇವಿ ಅವರನ್ನು ವಿವಾಹವಾದರು. ೧೯೦೨ ಆಗಸ್ಟ್ ೮ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ಮಹಾರಾಜರಾಗಿ ಅಧಿಕಾರ ಸ್ವೀಕರಿಸಿದರು.

Scanned by CamScanner

# ಮಾದರಿ ಮೈಸೂರು

- ೧೯೦೨ರ ಆಗಸ್ಟ್ ೮ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ಕೃಷ್ಣರಾಜ ಒಡೆಯರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಐಯ್ಯರ್ ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರು ಕಂಕಣ ಬದ್ದರಾದರು.

- ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡುದರಿಂದ, ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯ ರು ಅರಸು ಮನೆತನದಿಂದ ಬಂದವರಾಗಿದ್ದರೂ ಸಹ, ಜನತೆ ಆಡಳಿತದಲ್ಲಿ ಪಾಲ್ಗೊಳ್ಳುವಿಕೆಯ ಪರವಾಗಿದ್ದರು.

Scanned by CamScanner

# ಪ್ರಜಾ ಪ್ರತಿನಿಧಿ ಸಭೆ

- ಜನತೆಯ ಆಶೋತ್ತರಗಳಿಗೆ ಪೂರಕವಾಗಲು "ಪ್ರಜಾಪ್ರತಿನಿಧಿ ಸಭೆ" ಹಾಗೂ "ನ್ಯಾಯ ವಿಧೇಯಕ ಸಭೆ"ಗಳಿಗೆ ಮೈಸೂರು ಸಂಸ್ಥಾನದಲ್ಲಿ ಉನ್ನತ ಸ್ಥಾನವನ್ನು ಕಲ್ಪಿಸಿ ಕೊಟ್ಟದ್ದು ಇವರ ಪ್ರಮುಖ ಸಾಧನೆ. ಅವರ ಕಾಲದಲ್ಲಿ ಮೈಸೂರು ರಾಜ್ಯದಲ್ಲಿ ಹೆಸರಿಗೆ ಮಾತ್ರ ಇದ್ದ 'ಪ್ರಜಾ ಪ್ರತಿನಿಧಿ ಸಭೆ'ಯು ನೂತನ ರೂಪವನ್ನು ಪಡೆದು, ನಿಜವಾದ ಜನ ಪ್ರತಿನಿಧಿ ಸಭೆಯಾಗಿ ಪರಿವರ್ತನೆಯಾಯಿತು.

- ಮೊದಲ ಸಭೆಯಲ್ಲಿ ಅವರು ಮಾತನಾಡುತ್ತಾ, " ಮೈಸೂರು ರಾಜ್ಯದ ಆಡಳಿತದಲ್ಲಿ ನಾವು ಒಂದು ಹೊಸ ಪ್ರಯೋಗವನ್ನು ಆರಂಭಿಸಿದ್ದೇವೆ. ನಮ್ಮ ಪ್ರಜೆಗಳಿಗೆ ಅಖಂಡ ಸುಖ ಸಂಪತ್ತನ್ನು ಒದಗಿಸಿ ಕೊಡಬೇಕೆಂಬುದು ನನ್ನ ಜೀವನದ ಪರಮೊದ್ದೇಶ" ಎಂದರು. ಅದಕ್ಕಾಗಿ ೧೯೨೩ರರಲ್ಲಿ ಹೊಸ ಕಾನೂನೊಂದನ್ನು ಜಾರಿಗೆ ತಂದು, ಪ್ರಜಾ ಪ್ರತಿನಿಧಿ ಸಭೆಯನ್ನು ಶಾಸನಬದ್ದ ಸಂಸ್ಥೆಯನ್ನಾಗಿ ಮಾರ್ಪಡಿಸಿದರು.

- ಇದು ಪ್ರಜಾತಂತ್ರದ ದೃಷ್ಟಿಯಿಂದ ಭಾರತದಲ್ಲಿಯೇ

Scanned by CamScanner

- ಇದು ಪ್ರಜಾತಂತ್ರದ ದೃಷ್ಟಿಯಿಂದ ಭಾರತದಲ್ಲಿಯೇ ಮಾದರಿಯಾದ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು ಆರಂಭಿಸಿತು. ಪ್ರಜಾ ಪ್ರತಿನಿಧಿ ಸಭೆಯು ವರ್ಷಕ್ಕೆ ಎರಡು ಬಾರಿ (೧ ಜೂನ್ - ಮಹಾರಾಜರ ವರ್ಧಂತಿ , ೨ ಅಕ್ಟೋಬರ್ - ದಸರಾ ಮಹೋತ್ಸವ ) ಸಮಾವೇಶಗೊಂಡು ಕಲಾಪಗಳನ್ನು ನಡೆಸುತ್ತಿತ್ತು.

- ಅಲ್ಲಿ ವಾರ್ಷಿಕ ಆಯವ್ಯಯ ಪರಿಶೀಲನೆ, ಪ್ರಶ್ನೋತ್ತರಗಳು, ಠರಾವುಗಳನ್ನು ಮಂಡಿಸುವುದು ಮುಂತಾದ ಸಂಸದೀಯ ಮಾದರಿಯ ನಡವಳಿಕೆಗಳು ನಡೆಯುತ್ತಿದ್ದವು. ಪ್ರತಿನಿಧಿ ಸಭೆಯಲ್ಲಿದ್ದ ೨೭೫ ಸದಸ್ಯರಲ್ಲಿ ಹೆಚ್ಚು ಪ್ರತಿನಿಧಿಗಳು ಜನರಿಂದ ಆಯ್ಕೆಯಾದವರಾಗಿದ್ದರು. ಕಾಲಕ್ಕೆ ತಕ್ಕ ಹಾಗೇ ಚುನಾವಣೆ ಕ್ಷೇತ್ರಗಳನ್ನು ಮರುವಿಂಗಡಣೆ ಮಾಡಿದರು.

Scanned by CamScanner

## ನ್ಯಾಯ ವಿಧೇಯಕ ಸಭೆ

- ಪ್ರಜಾಪ್ರತಿನಿಧಿ ಸಭೆ ಜೊತೆಗೆ ೧೯೦೭ ರಲ್ಲಿ 'ನ್ಯಾಯ ವಿಧೇಯಕ' ಸಭೆಯನ್ನೂ ಸಹ ಸ್ಥಾಪಿಸಲಾಯಿತು. ಇದರ ಸದಸ್ಯರ ಸಂಖ್ಯೆ ೫೦. ಇದರಲ್ಲಿ ಜನರಿಂದ ಆಯ್ಕೆಯಾದವರು ೨೨ ಸದಸ್ಯರು. ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಸಂಸ್ಥೆ, ಜೂನ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿತ್ತು.
- ಪ್ರಜಾ ಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲ ವಿಷಯಗಳನ್ನೂ ಸಹ ವಿಮರ್ಶಿಸುವ ಅಧಿಕಾರ ಆ ಸಭೆಗೆ ಇದ್ದಿತು. ಮುಖ್ಯವಾಗಿ ಯಾವುದೇ ಕಾನೂನನ್ನು ಜಾರಿಗೊಳಿಸಲು ಆ ಸಭೆಯ ಅನುಮತಿ ಅಗತ್ಯವಾಗಿತ್ತು. ಆ ಸಭೆಗೆ ಸರ್ಕಾರದ ಖರ್ಚುಗಳನ್ನು ಕಡಿಮೆ ಮಾಡುವ ಅಧಿಕಾರ ಸಹ ಇದ್ದಿತು .

## ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

Scanned by CamScanner

# ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ

- ೧೯೧೮ರಲ್ಲಿ ಸರ್ಕಾರದ ಮುಖ್ಯ ನ್ಯಾಯಾಧೀಶರಾಗಿದ್ದ ಸರ್.ಲೆಸ್ಲಿ ಮಿಲ್ಲರ್ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿ, ಎಲ್ಲಾ ಸಮುದಾಯದ ಜನರಿಗೆ ಸರ್ಕಾರಿ ಉದ್ಯೋಗದಲ್ಲಿ ಪ್ರತಿನಿಧ್ಯ ದೊರಕುವಂತೆ ಅಧ್ಯಯನ ಮಾಡಿ, ವರದಿ ನೀಡಲು ಆದೇಶ ಮಾಡಿದರು. ನಂತರ ಆಯೋಗದ ಶಿಫಾರಸ್ಸುಗಳಂತೆ ಬ್ರಾಹ್ಮಣರು, ಆಂಗ್ಲೋ ಇಂಡಿಯನ್ನರನ್ನು ಹೊರತು ಪಡಿಸಿ ಉಳಿದ ಎಲ್ಲಾ ಜಾತಿಗಳನ್ನು ಹಿಂದೂಗಳೆಂದು ಪರಿಗಣಿಸಿ, ೧೯೨೧ರಲ್ಲಿ ಪ್ರಥಮ ಭಾರಿಗೆ ಎಲ್ಲಾ ಹಿಂದುಳಿದ ಸಮುದಾಯಗಳಿಗೆ ಶೇ.೭೫ರಷ್ಟು ಮೀಸಲಾತಿ ನೀಡಲು ಆದೇಶ ಹೊರಡಿಸಿದರು. ಹಾಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು "ಮೀಸಲಾತಿಯ ಜನಕ" ಎನ್ನುತ್ತಾರೆ.

- ಮಿಲ್ಲರ್ ಆಯೋಗ ರಚನೆ ಸಾಮಾಜಿಕ ಇತಿಹಾಸದಲ್ಲೇ ಒಂದು ಮೈಲಿಗಲ್ಲಾಯಿತು. ಮಿಲ್ಲರ್ ಆಯೋಗ ಜಾರಿಗೆ ಬರಲಾಗಿ ಮೊಟ್ಟ ಮೊದಲ ಬಾರಿಗೆ ಮೈಸೂರು ಸಂಸ್ಥಾನಕ್ಕೆ ಕಾಂತರಾಜೇ ಅರಸ್ ದಿವಾನರಾಗಲು ಸಾಧ್ಯವಾಯಿತು. ಈ ಕಾಲದಲ್ಲೇ ಒಕ್ಕಲಿಗರ ಸಂಘ,

Scanned by CamScanner

ಸಾಧ್ಯವಾಯಿತು. ಈ ಕಾಲದಲ್ಲೇ ಒಕ್ಕಲಿಗರ ಸಂಘ, ರೆಡ್ಡಿ ಜನಸಂಘ, ವೀರಶೈವರ ಜಾತಿ ಆಧಾರಿತ ಶಾಲಾ- ಕಾಲೇಜುಗಳು ಆರಂಭವಾದುವು.

- ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆ ಎಂದರೆ, ಸ್ಥಳೀಯ ಸಂಸ್ಥೆಗಳನ್ನು ರಚಿಸಿ, ಆಡಳಿತ ವಿಕೇಂದ್ರೀಕರಣಕ್ಕೆ ಅನುವು ಮಾಡಿ ಕೊಟ್ಟುದು. ರಾಜ್ಯದ ಸಣ್ಣ ಸಣ್ಣ ಪಟ್ಟಣಗಳಲ್ಲಿಯೂ ಸಹ ಮುನಿಸಿಪಾಲಿಟಿಗಳು ರಚನೆಯಾದವು. ಹಳ್ಳಿಗಳಲ್ಲಿ ಪ್ರಥಮ ಬಾರಿಗೆ ಗ್ರಾಮ ಪಂಚಾಯಿತಿಗಳು ಕಾರ್ಯ ನಿರ್ವಹಿಸಲು ಆರಂಭ ಮಾಡಿದುದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ಆಡಳಿತದಲ್ಲಿ ಜನರ ಭಾಗವಹಿಸುವಿಕೆಗೆ ಅಪಾರ ಉತ್ತೇಜನ ನೀಡಲಾಯಿತು.

- ಇವರ ಕಾಲದಲ್ಲಿ ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ ನಾಲ್ವಡಿಯವರನ್ನ ವಿದ್ವಾಂಸರು, ಶಿಕ್ಷಣ ತಜ್ಞರು, ಇತಿಹಾಸಕಾರರು ' ಸಾಮಾಜಿಕ ಕಾನೂನುಗಳ ಹರಿಕಾರ' ಎಂದು ಕರೆದಿದ್ದಾರೆ. ಸಾಹಿತ್ಯ, ಸಂಗೀತ, ವಾಸ್ತು ಶಿಲ್ಪಗಳ ಅಭಿವೃದ್ಧಿಗೆ ಪ್ರಾಮುಖ್ಯತೆಯನ್ನು ಕೊಟ್ಟು 1915 ರಲ್ಲಿ ಬೆಂಗಳೂರಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರಾರಂಭಿಸಿದರು.

Scanned by CamScanner

1. ಗ್ರಾಮ ನೈರ್ಮಲೀಕರಣ
2. ವೈದ್ಯ ಸಹಾಯ
3. ವಿದ್ಯಾ ಪ್ರಚಾರ
4. ನೀರಿನ ಸೌಕರ್ಯ
5. ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಸಂಸ್ಥೆಗಳಾದವು.

## ಹೊಸ ರೈಲು ದಾರಿಗಳ ನಿರ್ಮಾಣ

1. ಮೈಸೂರು - ಅರಸೀಕೆರೆ,
2. ಬೆಂಗಳೂರು - ಚಿಕ್ಕಬಳ್ಳಾಪುರ,
3. ಚಿಕ್ಕಜಾಜೂರು - ಚಿತ್ರದುರ್ಗ,
4. ನಂಜನಗೂಡು - ಚಾಮರಾಜನಗರ,
5. ತರೀಕೆರೆ - ನರಸಿಂಹರಾಜಪುರ,
6. ಶಿವಮೊಗ್ಗ - ಆನಂದಪುರ ಈ ಎಲ್ಲ ರೈಲು ಮಾರ್ಗಗಳನ್ನು ೧೯೩೧ ರ ವೇಳೆಗೆ ಪೂರೈಸಲಾಯಿತು .

Scanned by CamScanner

## ನೀರಾವರಿ

- ೧೯೦೭ರಲ್ಲಿ 'ವಾಣೀವಿಲಾಸ ಸಾಗರ'(ಮಾರಿ ಕಣಿವೆ) ಕಟ್ಟಲ್ಪಟ್ಟಿತು. ೧೯೧೧ ರಲ್ಲಿ ಆರಂಭವಾದ 'ಕೃಷ್ಣರಾಜ ಸಾಗರ' ಭಾರತದ ಮೊಟ್ಟ ಮೊದಲ ಬೃಹತ್ ಜಲಾಶಯ. ೧೯೦೦ರಲ್ಲಿಯೇ ಶಿವನ ಸಮುದ್ರದ ಬಳಿ ಕಾವೇರಿ ನದಿ ಯಿಂದ ಜಲ ವಿದ್ಯುತ್ ಕೇಂದ್ರ ಆರಂಭವಾಯಿತು.
- ಇದು ಭಾರತದ ಮೊದಲ ಜಲ ವಿದ್ಯುತ್ ಕೇಂದ್ರ. ಏಷ್ಯಾ ಖಂಡದಲ್ಲೇ ಮೊದಲ ಜಲ ವಿದ್ಯುತ್ ಯೋಜನೆಯನ್ನು ಪ್ರಾರಂಭಿಸಿದ ಕೀರ್ತಿ ನಾಲ್ವಡಿಯವರದು. ಇದರ ಫಲಿತಾಂಶವಾಗಿ ೧೯೦೫ ಆಗಸ್ಟ್ ೩ ರಂದು ಪ್ರಥಮವಾಗಿ ಬೆಂಗಳೂರಿನಲ್ಲಿ ದೀಪಗಳು ಬೆಳಗಿದವು.

## ಗೆಜೆಟ್ ಪ್ರಕಟಣೆ

"ಜಾತಿ ಆಧಾರದ ಮೇಲೆ ಯಾರನ್ನೂ ಸಾರ್ವಜನಿಕ ಶಾಲೆಗಳಿಂದ ದೂರವಿಡುವ ಪರಿಪಾಠಗಳನ್ನು ಸರ್ಕಾರ ಎತ್ತಿ ಹಿಡಿಯದು. ಸಾರ್ವಜನಿಕ ಶಾಲೆಗಳನ್ನು ತೆರಿಗೆ ಆದಾಯದದಿಂದ ನಡೆಸುತ್ತಿರುವುದರಿಂದ ಶಿಕ್ಷಣವು ಸಹ, ಆಸ್ಪತ್ರೆ, ನ್ಯಾಯಾಲಯ, ರೈಲು ಪ್ರಯಾಣ ಇತ್ಯಾದಿ ಸಾರ್ವಜನಿಕ ಕ್ಷೇತ್ರಗಳಂತೆ ರಾಜ್ಯದ ಎಲ್ಲಾ ವರ್ಗದ

Scanned by CamScanner

11:39 AM ... 4G VoLTE 54%

# ಶೈಕ್ಷಣಿಕ ಕೊಡುಗೆ ಮತ್ತು ಸುಧಾರಣೆ

- ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು ಉಚಿತವಾಗಿ ಮತ್ತು ಕಡ್ಡಾಯವಾಗಿ ಆರಂಭಿಸಲಾಯಿತು .ನಾಲ್ವಡಿ ಕೃಷ್ಣರಾಜರ ಮಹತ್ತರ ಸಾಧನೆಯೆಂದರೆ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದುದು. ದೇಶದಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವನ್ನು ಮೈಸೂರಿನಲ್ಲಿ ತೆರೆದು ದಾಖಲೆ ನಿರ್ಮಿಸಿದ ಕೀರ್ತಿ ನಾಲ್ವಡಿಯವರಿಗೆ ಸಲ್ಲುತ್ತದೆ. ಅವರ ಕಾಲದಲ್ಲಿ ರಾಜ್ಯದ ನಾನಾ ಭಾಗಗಳಲ್ಲಿ ೨೭೦ ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದವು.

- ಬೆಂಗಳೂರಿನ ಮಿಂಟೊ ಕಣ್ಣಾಸ್ಪತ್ರೆ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿತ್ತು. ಮೈಸೂರಿನ ಕ್ಷಯರೋಗ ಆಸ್ಪತ್ರೆ ಉತ್ತಮಗೊಂಡಿತು. ವಾಣಿಜ್ಯ ಕ್ಷೇತ್ರದಲ್ಲಿ ಮೈಸೂರು ಬ್ಯಾಂಕ್ ಖಾಸಗೀ ಸಹಭಾಗಿತ್ವದೊಡನೆ ಕಾರ್ಯಾರಂಭ ಮಾಡಿತು. ೧೯೦೬ ರಲ್ಲಿಯೇ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು. ರೈತರಿಗಾಗಿ ಜಮೀನು ಅಡಮಾನ ಬ್ಯಾಂಕುಗಳು ಆರಂಭವಾದವು.

Scanned by CamScanner

1. ಬುಡಕಟ್ಟು, ಗಿರಿಜನ, ಅರಣ್ಯವಾಸಿಗಳಿಗೆ ಮೊಟ್ಟ ಮೊದಲು ಶಾಲೆಗಳನ್ನು ತೆರೆಯಲಾಯಿತು. ಅಸ್ಪೃಶ್ಯರಿಗಾಗಿಯೇ ಹುಸ್ಕೂರು ಹಾಗೂ ಟಿ.ನರಸೀಪುರದಲ್ಲಿ ಶಾಲೆಗಳನ್ನು ಪ್ರಾರಂಭಿಸಲಾಯಿತು. ತಂತರ ಇವರ ಆಡಳಿತಾವಧಿಯಲ್ಲಿ ಸುಮಾರು ೮೦೦ ಶಾಲೆಗಳನ್ನು ತೆರೆಯಲಾಯಿತು.

2. ಮೊಟ್ಟ ಮೊದಲ ಬಾರಿಗೆ ಸ್ತ್ರೀ ಶಿಕ್ಷಣವನ್ನು ಕಡ್ಡಾಯ ಮಾಡಲಾಯಿತು.

3. ೧೯೦೨ - ಬೆಂಗಳೂರಿನ ಪ್ರಥಮ ವಾಣಿಜ್ಯಶಾಲೆ ಪ್ರಾರಂಭಿಸಲಾಯಿತು.

4. ೧೯೦೩ - ಮೈಸೂರಿನಲ್ಲಿ ತಾಂತ್ರಿಕ ಶಾಲಾ ಸ್ಥಾಪನೆ.

5. ೧೯೦೬ - ಕುರುಡ ಹಾಗೂ ಮೂಕ ಮಕ್ಕಳಿಗೆ ಶಾಲೆಗಳನ್ನು ಪ್ರಾರಂಭಿಸಿದರು.

6. ೧೯೧೧ - ಎಸ್.ಎಸ್.ಎಲ್.ಸಿ ಪರೀಕ್ಷೆಗಳನ್ನು ಆರಂಭಿಸಲಾಯಿತು.

7. ೧೯೧೨ - ಮೊದಲ ಬಾರಿಗೆ ವಯಸ್ಕರ ಶಿಕ್ಷಣ ಆಂದೋಲನ ಪ್ರಾರಂಭಿಸಿ, ೭,೦೦೦ ಸಾಕ್ಷರತಾ ಕೇಂದ್ರಗಳನ್ನು ತೆರೆದಿದ್ದರು.

8. ೧೯೧೬ - ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ, [illegible] ಉರ್ದು ಶಾಲೆಗಳ ಸ್ಥಾಪನೆ

Scanned by CamScanner

8. ೧೯೧೬ - ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ. ಉರ್ದು ಶಾಲೆಗಳ ಸ್ಥಾಪನೆ.

9. ೧೯೧೮ - ಶಾಲಾ ಪ್ರವೇಶಕ್ಕೆ ಜಾತಿ ಪದ್ಧತಿಯನ್ನು ನಿರ್ಮೂಲನೆ ಮಾಡಲಾಯಿತು.

10. ೧೯೧೯ - ಮಾಧ್ಯಮಿಕ ಶಾಲಾ ಮಟ್ಟದಲ್ಲಿ ಶಿಕ್ಷಣ ಶುಲ್ಕವನ್ನು ರದ್ದು ಮಾಡಿದರು.

## ಮೈಸೂರು ಘಟಿಕೋತ್ಸವದಲ್ಲಿ ಮಾಡಿದ ಭಾಷಣ

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮೈಸೂರು ವಿಶ್ವವಿದ್ಯಾನಿಲಯದ ಮೊಟ್ಟ ಮೊದಲ ಘಟಿಕೋತ್ಸವದಲ್ಲಿ - "ಶಿಕ್ಷಣವು ಕೆಲವೇ ಅದೃಷ್ಟಶಾಲಿಗಳಿಗೆ ಮಾತ್ರವಲ್ಲ. ಎಲ್ಲರಿಗೂ ಉನ್ನತ ಶಿಕ್ಷಣ ದೊರೆಯಲಿ ಎಂಬ ಕಾರಣಕ್ಕಾಗಿಯೇ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲಾಗಿದೆ. ಇದು ದೇಶದ ಅಸ್ಪೃಶ್ಯ, ಹಿಂದುಳಿದ, ಅಲ್ಪಸಂಖ್ಯಾತರುಗಳಿಗೆ ಅಂದರೆ ಶೇ.೮೫ ರಷ್ಟಿರುವ ಹಿಂದುಳಿದ ಎಲ್ಲಾ ಸಮುದಾಯದವರಿಗೆ ಇದೆ. ಇಲ್ಲಿನ ಬೋಧಕರು ಅವರ ತಿಳುವಳಿಕೆಯ ಮಟ್ಟಕ್ಕೆ ಇಳಿದು ತಮ್ಮ ಜ್ಞಾನವನ್ನು ಅವರೊಂದಿಗೆ ಹಂಚಿಕೊಳ್ಳಬೇಕು" ಎಂದಿದ್ದರು.

## ಜಾರಿ ಮಾಡಿದ ಸಾಮಾಜಿಕ ಕಾನೂನುಗಳು

Scanned by CamScanner

# ಜಾರಿ ಮಾಡಿದ ಸಾಮಾಜಿಕ ಕಾನೂನುಗಳು

- ೧೯೦೯ ರಲ್ಲಿ ದೇವದಾಸಿ ಪದ್ಧತಿ ನಿಷೇಧ
- ೧೯೧೦ ರಲ್ಲಿ ಬಸವಿ ಪದ್ಧತಿ ರದ್ಧತಿ
- ೧೯೧೦ ರಲ್ಲಿ 'ಗೆಜ್ಜೆಪೂಜೆ' ಪದ್ಧತಿ ಸಂಪೂರ್ಣ ನಿರ್ಮೂಲನೆ
- ೧೯೩೬ ಜುಲೈ ೧೪ ರಂದು ವೇಶ್ಯಾವೃತ್ತಿ ತಡೆಗಟ್ಟುವ ಕಾಯ್ದೆ ಜಾರಿ
- ೧೯೩೬ ಜುಲೈ ೭ ರಂದು ವಿಧವೆಯರಿಗೆ ಮರುವಿವಾಹ ಮಾಡಿಕೊಳ್ಳುವ ಕಾಯ್ದೆಯ ಜಾರಿ
- ೧೯೩೬ ಜುಲೈ ೭ ರಂದು ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿ
- ೧೯೧೪ ರಲ್ಲಿ ಶಾಲಾ ಪ್ರವೇಶಕ್ಕೆ ಜಾತಿ ಪರಿಗಣನೆಯ ನಿಷೇಧ
- ೧೯೧೯ ರಲ್ಲಿ ಮಾಧ್ಯಮಿಕ ಶಾಲಾ ಮಟ್ಟದಲ್ಲಿ ಶಿಕ್ಷಣ ಶುಲ್ಕ ರದ್ಧತಿ
- ೧೯೨೭ ರಲ್ಲಿ ಸ್ತ್ರೀಯರಿಗೆ ಮತದಾನದ ಹಕ್ಕನ್ನು ಮೊಟ.ಮೊದಲ ಬಾರಿಗೆ ಕಲಿ.ಸಿಕೊಟ.ರು

Scanned by CamScanner

- ೧೯೨೭ ರಲ್ಲಿ ಸ್ತ್ರೀಯರಿಗೆ ಮತದಾನದ ಹಕ್ಕನ್ನು ಮೊಟ್ಟಮೊದಲ ಬಾರಿಗೆ ಕಲ್ಪಿಸಿಕೊಟ್ಟರು
- ೧೯೦೫ ರಲ್ಲಿ ಸಹಕಾರಿ ಕಾರ್ಮಿಕ ಪರಿಹಾರ ಕಾಯ್ದೆಯನ್ನು ಜಾರಿಗೆ ತಂದರು
- ೧೯೧೩ ರಲ್ಲಿ ಮೈಸೂರು ಗ್ರಾಮ ನ್ಯಾಯಾಲಯ ಕಾಯ್ದೆಯನ್ನು ಜಾರಿ ಮಾಡಿದರು
- ೧೯೧೮ ರಲ್ಲಿ ಗ್ರಾಮ ಪಂಚಾಯ್ತಿಗಳ ಕಾಯ್ದೆಯನ್ನು ಜಾರಿಗೆ ತಂದರು

## ಆರ್ಥಿಕ ಸುಧಾರಣೆಗಳು

1. ಭಾರತದ ಆರ್ಥಿಕತೆಯ ಬೆನ್ನೆಲುಬು ಕೃಷಿ ಎಂದು ಅರಿತ್ತಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ರೈತರಿಗೆ ಸುಲಭವಾಗಿ ಸಾಲ ದೊರೆಯುವಂತೆ ಅನುಕೂಲವಾಗಲು ೧೯೦೫ರಲ್ಲಿ ಸಹಕಾರಿ ಸೊಸೈಟಿಗಳನ್ನು ಜಾರಿಗೆ ತಂದರು. ಆ ಮೂಲಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕು ಮತ್ತು ಭೂ ಅಭಿವೃದ್ದಿ ಬ್ಯಾಂಕ್‌ಗಳು ಪ್ರಾರಂಭಗೊಂಡವು.
2. ಮಂಡ್ಯ ಮತ್ತು ಮೈಸೂರು ಪ್ರಾಂತ್ಯದ ರೈತರ ಒಣಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ನಾಲ್ವಡಿ ಕೃಷ್ಣರಾಜ ಒಡೆಯರ್ ಕಾವೇರಿ ನದಿಗೆ

Scanned by CamScanner

2. ಮಂಡ್ಯ ಮತ್ತು ಮೈಸೂರು ಪ್ರಾಂತ್ಯದ ರೈತರ ಒಣಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ನಾಲ್ವಡಿ ಕೃಷ್ಣರಾಜ ಒಡೆಯರ್ ಕಾವೇರಿ ನದಿಗೆ ಅಡ್ಡಲಾಗಿ ಕೃಷ್ಣರಾಜ ಸಾಗರ ಅಣೆಕಟ್ಟನ್ನು ಕಟ್ಟಿಸಿ, ೧,೨೦,೦೦೦ಎಕರೆ ಜಮೀನಿಗೆ ನೀರಾವರಿ ಕಲ್ಪಿಸಿದರು.

3. ಸ್ಥಳೀಯ ಆಡಳಿತಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಲು ೧೯೧೮ ರಲ್ಲಿ ಗ್ರಾಮ ಪಂಚಾಯ್ತಿಗಳ ಕಾಯ್ದೆಯನ್ನು ಜಾರಿಗೆ ತರಲಾಯಿತು.

4. ಗ್ರಾಮೀಣ ಜನರಿಗೆ ಶೀಘ್ರ ನ್ಯಾಯ ಒದಗಿಸಲು ಅವರಿಗೆ ೧೯೧೩ರಲ್ಲಿ 'ದಿ ಮೈಸೂರು ವಿಲೇಜ್ ಕೋರ್ಟ್ ಆಕ್ಟ್'ನ್ನು ಜಾರಿಗೆ ತಂದರು.

5. ರೈತರು ಸಾಲದ ಅಡಿಯಲ್ಲಿ ಸಿಕ್ಕಿ ಭೂಮಿಯನ್ನು ಕಳೆದುಕೊಳ್ಳುವ ಸ್ಥಿತಿ ತಲುಪಿದಾಗ ನಾಲ್ವಡಿ ಕೃಷ್ಣರಾಜ ಒಡೆಯರ್ ೧೯೨೮ರಲ್ಲಿ 'ಅಗ್ರಿಕಲ್ಚರಿಸ್ಸ್ ಡಿಬೆಟ್ ರಿಲೀಫ್ ಆಕ್ಟ್"ನ್ನುಜಾರಿಗೊಳಿಸಿದರು.

6. ಏಷ್ಯಾ ಖಂಡದಲ್ಲೇ ಮೊದಲ ಜಲ ವಿದ್ಯುತ್ ಯೋಜನೆಯನ್ನು ಪ್ರಾರಂಭಿಸಿದ ಕೀರ್ತಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಸಲ್ಲುತ್ತದೆ. ೧೯೦೨ ರಲ್ಲಿ ಕಾವೇರಿ ನದಿಗೆ ಶಿವನ ಸಮುದ್ರದಲ್ಲಿ ಜಲವಿದ್ಯುತ್ ಕಾರ್ಯಾಗಾರ ಸ್ಥಾಪನೆಯಾಯಿತು. ಜೊತೆಗೆ ಪ್ರಥಮ ಬಾರಿಗೆ ವಿದ್ಯುತ್‌ನ್ನು ಕೋಲಾರದ ಗಣಿ ಪ್ರದೇಶಕೆ ಸರಬರಾಗಿಸಲಾಗಿತು

Scanned by CamScanner

7. ೧೯೩೯ರ ಫೆಬ್ರವರಿ ೫ರಂದು ಜೋಗ ಜಲಪಾತದ ಬಳಿ ಶರಾವತಿ ನೀರಿನಿಂದ ವಿದ್ಯುತ್ ಉತ್ಪಾದನೆ ಮಾಡಲು ಯೋಜನೆ ರೂಪಿಸಲಾಯಿತು.

## ಕೈಗಾರಿಕ ಅಭಿವೃದ್ಧಿಗಳು

೧೯೧೪ರಲ್ಲಿ ಮೆಕಾನಿಕಲ್ ಇಂಜಿನಿಯರಿಂಗ್ ಸ್ಕೂಲನ್ನು ಆರಂಭಿಸಿದರು. ಈ ಸಂದರ್ಭದಲ್ಲಿ ಆರಂಭಗೊಂಡ ಕೈಗಾರಿಕೆಗಳೆಂದರೆ-

1. ಭದ್ರಾವತಿಯ ಮೈಸೂರು ಕಬ್ಬಿಣದ ಕಾರ್ಖಾನೆ
2. ಬೆಂಗಳೂರಿನ ಸಾಬೂನು ಕಾರ್ಖಾನೆ
3. ಮೈಸೂರಿನ ಗಂಧದೆಣ್ಣೆ ಕಾರ್ಖಾನೆ
4. ಸಿಮೆಂಟ್ ಕಾರ್ಖಾನೆ
5. ೧೯೩೪ - ಮಂಡ್ಯದಲ್ಲಿ ಮೈಸೂರು ಸಕ್ಕರೆ ಕಂಪೆನಿ ಪ್ರಾರಂಭ
6. ೧೯೩೬ - ಮೊಟ್ಟ ಮೊದಲ ಮೈಸೂರು ಪೇಪರ್ ಮಿಲ್ ಆರಂಭ
7. ಮಂಗಳೂರು ಹೆಂಚು ಕಾರ್ಖಾನೆ

Scanned by CamScanner

8. ಷಹಬಾದಿನ ಸಿಮೆಂಟ್ ಕಾರ್ಖಾನೆ
9. ಮೈಸೂರಿನ ಅರಗು ಮತ್ತು ಬಣ್ಣದ ಕಾರ್ಖಾನೆ
10. ಕೊಡಗಿನ ಕಾಫಿ ಸಂಶೋಧನಾ ಕೇಂದ್ರಗಳು ಪ್ರಾರಂಭಗೊಂಡವು

## ರಸ್ತೆ ಸಾರಿಗೆ

1. ಬೆಂಗಳೂರು-೨೧೫ ಮೈಲಿ
2. ಕೋಲಾರ -೨೧೧ ಮೈಲಿ
3. ತುಮಕೂರು -೧೮೯ ಮೈಲಿ
4. ಚಿತ್ರದುರ್ಗ - ೨೨೦ ಮೈಲಿ
5. ಮೈಸೂರು -೩೬೮ ಮೈಲಿ
6. ಹಾಸನ - ೧೯೧ ಮೈಲಿ
7. ಶಿವಮೊಗ್ಗ - ೨೮೩ ಮೈಲಿ
8. ಕಡೂರು - ೩೨೫ ಮೈಲಿ

## ರೈಲು ಸಾರಿಗೆ

Scanned by CamScanner

**ರೈಲು ಸಾರಿಗೆ**

1. ೧೯೧೩ ರಲ್ಲಿ ಹೊಸ ರೈಲು ಸಾರಿಗೆ ನಿರ್ಮಾಣ ಇಲಾಖೆ ಆರಂಭವಾಯಿತು
2. ೧೯೧೮ ರಲ್ಲಿ ಚಿಕ್ಕಬಳ್ಳಾಪುರ-ಯಲಹಂಕ-ಮೈಸೂರು-ಅರಸೀಕೆರೆ ಮೀಟರ್‌ಗೇಜ್ ನಿರ್ಮಾಣವಾಯಿತು.
3. ೧೯೨೧ ರಲ್ಲಿ ಚಿಕ್ಕ ಜಾಜೂರು-ಚಿತ್ರದುರ್ಗ ಮೀಟರ್‌ಗೇಜ್ ನಿರ್ಮಾಣವಾಯಿತು.

# ಮೈಸೂರು ಸಂಸ್ಥಾನದ ಬಗೆಗಿನ ಮೆಚ್ಚುಗೆಯ ನುಡಿಗಳು

1. ಡಿ.ವಿ.ಜಿಯವರ ಮಾತು- "ನನ್ನ ತಿಳುವಳಿಕೆಯಲ್ಲಿ ೧೮೮೧ ರಿಂದ ೧೯೪೦ರ ಅವಧಿಯ ವರ್ಷಗಳು ಮೈಸೂರಿನ ಸುವರ್ಣ ಯುಗ" ಎಂದು ಹೇಳಿದರೆ ಉತ್ಪ್ರೇಕ್ಷೆಯಾಗಲಾರದು.
2. ಇಂಗ್ಲೆಂಡಿನ ಗ್ರಾಫಿಕ್ ಪತ್ರಿಕೆ- ಮಾದರಿ ಸಂಸ್ಥಾನ ಎಂಬ ಹೆಮ್ಮೆಯ ಹೆಸರಿಗೆ ಮತ್ಯಾವ ಭಾರತೀಯ ಸಂಸ್ಥಾನಕ್ಕೂ ಆ ಅರ್ಹತೆ ಇಲ್ಲ. (ಮಾರ್ಚ್-೧೦,೧೯೦೬)

Scanned by CamScanner

3. ಎನ್‌ಸೈಕ್ಲೋಪಿಡಿಯಾ ಬ್ರಿಟಾನಿಕಾದ ಬೃಹತ್ ಕೃತಿಯಲ್ಲಿ-ಭಾರತ ಖಂಡದಲ್ಲಿ ಅತ್ಯಂತ ಹೆಚ್ಚಿನ ಪ್ರಗತಿಯನ್ನು ಮುಂದುವರೆಸುತ್ತಿರುವ ರಾಜ್ಯ ಎಂಬ ಹೆಗ್ಗಳಿಕೆಗೆ ನ್ಯಾಯವಾದ ಅರ್ಹತೆಯನ್ನು ಪಡೆದಿರುವ ಮೈಸೂರು ಮಾದರಿ ಸಂಸ್ಥಾನವಾಗಿದೆ-೧೯೩೮

# ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಅಂತಿಮ ಯಾತ್ರೆ

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ೩೮ ವರ್ಷಗಳ ಕಾಲ ದಕ್ಷ ಆಡಳಿತ ನಡೆಸಿ ಪ್ರಜೆಗಳಿಂದ "ರಾಜರ್ಷಿ" ಬಿರುದು ಪಡೆದರು. ತಮ್ಮ ಸಂಸ್ಥಾನದ ಏಳಿಗೆಗಾಗಿ, ತಮ್ಮ ಪ್ರಜೆಗಳ ನೆಮ್ಮದಿ ಬದುಕಿಗಾಗಿ ತಮ್ಮ ಇಡೀ ಜೀವನವನ್ನೇ ಮುಡಿಪಾಗಿಟ್ಟರು. ಸಾಮಾಜಿಕ ಪರಿವರ್ತನೆಯ ರೂವಾರಿಯಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಆಗಸ್ಟ್ ೩, ೧೯೪೦ರಲ್ಲಿ ತಮ್ಮ ಇಹಲೋಕದ ಯಾತ್ರೆ ಮುಗಿಸಿದರು.

Scanned by CamScanner

ಮುಗಿಸಿದರು.



ನಾಲ್ವಡಿ ಕೃಷ್ಣರಾಜ ಒಡೆಯರು ಹಾಗು ಅವರ ತಂದೆ ೯ನೇ ಚಾಮರಾಜ ಒಡೆಯರು ಹಾಗು ಸಹೋದರರು



೨ ಫೆಬ್ರವರಿ ೧೮೯೫ ರಂದು ಚಿತ್ರಿಸಿದ ನಾಲ್ವಡಿ ಕೃಷ್ಣ ರಾಜ ಒಡೆಯರ ಚಿತ್ರ

Scanned by CamScanner

೨ ಫೆಬ್ರವರಿ ೧೮೯೫ ರಂದು ಚಿತ್ರಿಸಿದ ನಾಲ್ವಡಿ ಕೃಷ್ಣ ರಾಜ ಒಡೆಯರ ಚಿತ್ರ



ನಾಲ್ವಡಿ ಕೃಷ್ಣರಾಜ ಒಡೆಯರು ಹಾಗು ಸಹೋದರರು



೧೯೦೬ರಲ್ಲಿ ನಾಲ್ವಡಿ ಕೃಷ್ಣ ರಾಜ ಒಡೆಯರು



Scanned by CamScanner